**All India Radio: Bangalore**
**National Bulletin In Kannada**
**29.11.2025  1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ೬೦ನೇ ಅಖಿಲ ಭಾರತ ಡಿಜಿಪಿ-ಐಜಿಪಿ ಸಮ್ಮೇಳನ ಪ್ರಗತಿಯಲ್ಲಿ
2. ಸಂಸತ್ತಿನ ಚಳಿಗಾಲದ ಅಧಿವೇಶನ ಸೋಮವಾರದಿಂದ ಆರಂಭ; ನಾಳೆ ಕೇಂದ್ರ ಸರ್ಕಾರದಿಂದ ಸರ್ವಪಕ್ಷ ಸಭೆ
3. ದಿತ್ವಾ ಚಂಡಮಾರುತ; ಆಪರೇಷನ್ ಸಾಗರ್ ಬಂಧು ಅಡಿ ಶ್ರೀಲಂಕಾಕ್ಕೆ ಭಾರತದಿಂದ ಅಗತ್ಯ ನೆರವು
4. ಏರ್ ಬಸ್ ವಿಮಾನಗಳಿಗೆ ಸುರಕ್ಷತಾ ಮಾನದಂಡ ಪೂರೈಸಲು ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯದಿಂದ ಸೂಚನೆ; ವಿಮಾನ ಹಾರಾಟದಲ್ಲಿ ವ್ಯತ್ಯಯ
5. ಮನ್ ಕಿ ಬಾತ್‌ನ ೧೨೮ನೇ ಆವೃತ್ತಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಭಾರತೀಯರನ್ನುದ್ದೇಶಿಸಿ ಭಾಷಣ

<><><><>

ಛತ್ತೀಸ್‌ಗಢದ ರಾಯ್‌ಪುರದಲ್ಲಿಂದು ನಡೆಯುತ್ತಿರುವ ೬೦ನೇ ಅಖಿಲ ಭಾರತ ಪೊಲೀಸ್ ಮಹಾನಿರ್ದೇಶಕರು ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ - ಡಿಜಿಪಿ-ಐಜಿಪಿ ಸಮ್ಮೇಳನದ ಅಧ್ಯಕ್ಷತೆಯನ್ನು ಪ್ರಧಾನಿ ನರೇಂದ್ರ ಮೋದಿ ವಹಿಸಿದ್ದಾರೆ. ಸಮ್ಮೇಳನದ ಸಮಯದಲ್ಲಿ ಪ್ರಧಾನಿಯವರು ವಿಶಿಷ್ಟ ಸೇವೆಗಾಗಿ ರಾಷ್ಟ್ರಪತಿಗಳ ಪೊಲೀಸ್ ಪದಕವನ್ನು ಸಹ ಪ್ರದಾನ ಮಾಡಲಿದ್ದಾರೆ. ನವ ರಾಯ್‌ಪುರದ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನಲ್ಲಿ ನಡೆಯುತ್ತಿರುವ ಮೂರು ದಿನಗಳ ಈ ಸಮ್ಮೇಳನಕ್ಕೆ ನಿನ್ನೆಕೇಂದ್ರ ಗೃಹ ಸಚಿವ ಅಮಿತ್ ಶಾ ಚಾಲನೆ ನೀಡಿದರು.  ಈ ವೇಳೆ ಅವರು, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ಡಿಜಿಪಿ-ಐಜಿಪಿ ಸಮ್ಮೇಳನವು ದೇಶದ ಆಂತರಿಕ ಭದ್ರತಾ ಸವಾಲುಗಳನ್ನು ಪರಿಹರಿಸಲು ಪ್ರಮುಖ ವೇದಿಕೆಯಾಗಿ ಹೊರಹೊಮ್ಮಿದೆ. ಸಮಸ್ಯೆಗಳು ಮತ್ತು ಸವಾಲುಗಳನ್ನು ಗುರುತಿಸುವುದರಿಂದ ಹಿಡಿದು ಕಾರ್ಯತಂತ್ರಗಳು ಮತ್ತು ನೀತಿಗಳನ್ನು ರೂಪಿಸುವವರೆಗೆ ಇದು ಪ್ರಮುಖ ವೇದಿಕೆಯಾಗಿದೆ ಎಂದರು. ಕೇಂದ್ರ ಗೃಹ ಸಚಿವರು ದೇಶದ ಮೂರು ಅತ್ಯುತ್ತಮ ಪೊಲೀಸ್ ಠಾಣೆಗಳಿಗೆ ಅತ್ಯುತ್ತಮ ಸೇವೆಗಾಗಿ ಪೊಲೀಸ್ ಪದಕಗಳು ಮತ್ತು ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ವಿಕಸಿತ ಭಾರತ - ಭದ್ರತಾ ಆಯಾಮಗಳು ಎಂಬುದು ಸಮ್ಮೇಳನದ ಈ ವರ್ಷದ ಧ್ಯೇಯವಾಕ್ಯವಾಗಿದೆ. ಸಮ್ಮೇಳನದಲ್ಲಿ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಕೇಂದ್ರ ಗೃಹ ವ್ಯವಹಾರಗಳ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ, ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಪೊಲೀಸ್ ಮಹಾನಿರ್ದೇಶಕರುಗಳು ಮತ್ತು ಕೇಂದ್ರೀಯ ಪೊಲೀಸ್ ಸಂಸ್ಥೆಗಳ ಮುಖ್ಯಸ್ಥರು ಭಾಗವಹಿಸಿದ್ದಾರೆ.

<><><><>

ಸೋಮವಾರದಿಂದ ಆರಂಭವಾಗಲಿರುವ ಸಂಸತ್ತಿನ ಚಳಿಗಾಲದ ಅಧಿವೇಶನಕ್ಕೆ ಮುನ್ನ ಕೇಂದ್ರ ಸರ್ಕಾರ ನಾಳೆ ಸರ್ವಪಕ್ಷಗಳ ಸಭೆ ಕರೆದಿದೆ. ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಸಂಸತ್ತಿನ ಎರಡೂ ಸದನಗಳ ರಾಜಕೀಯ ಪಕ್ಷಗಳ ನಾಯಕರನ್ನು ಭೇಟಿ ಮಾಡಲಿದ್ದಾರೆ. ಸಭೆಯ ಸಂದರ್ಭದಲ್ಲಿ, ಲೋಕಸಭೆ ಮತ್ತು ರಾಜ್ಯಸಭೆಯ ಸುಗಮ ಕಾರ್ಯನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಎಲ್ಲಾ ರಾಜಕೀಯ ಪಕ್ಷಗಳಿಂದ ಸಹಕಾರವನ್ನು ಕೋರಲಿದೆ. ಮುಂದಿನ ತಿಂಗಳು ೧ ರಿಂದ ೧೯ರ ವರೆಗೆ ಚಳಿಗಾಲದ ಅಧಿವೇಶನ ನಡೆಯಲಿದೆ. ಅಧಿವೇಶನದ ಸಂದರ್ಭದಲ್ಲಿ, ಹಲವಾರು ಪ್ರಮುಖ ಶಾಸನಗಳನ್ನು ಚರ್ಚೆ ಮತ್ತು ಅಂಗೀಕಾರಕ್ಕಾಗಿ ಕೈಗೆತ್ತಿಕೊಳ್ಳಲು ನಿರ್ಧರಿಸಲಾಗಿದೆ.

<><><><>

ಶ್ರೀಲಂಕಾದ ಕರಾವಳಿಯಲ್ಲಿ ಬೀಸುತ್ತಿರುವ ದಿತ್ವಾ ಚಂಡಮಾರುತ ಸುಮಾರು ೮ ಕಿಲೋಮೀಟರ್ ವೇಗದಲ್ಲಿ ನೈಋತ್ಯ ಬಂಗಾಳಕೊಲ್ಲಿಯ ಮೇಲೆ  ಚಲಿಸುತ್ತಿದೆ. ಇದು ಜಾಫ್ನಾದಿಂದ ೮೦ ಕಿಲೋಮೀಟರ್ ಆಗ್ನೇಯ ದಿಕ್ಕಿನಲ್ಲಿ ಕಾರೈಕಲ್‌ನಿಂದ ೧೯೦ ಕಿಲೋಮೀಟರ್ ಹಾಗೂ ಚೆನ್ನೈನ ದಕ್ಷಿಣಕ್ಕೆ ೪೦೦ ಕಿಲೋಮೀಟರ್ ದೂರದಲ್ಲಿದೆ.  ಇದು ನಾಳೆ ಬೆಳಗಿನಜಾವ ಉತ್ತರ ತಮಿಳುನಾಡು ಮತ್ತು ದಕ್ಷಿಣ ಆಂಧ್ರ ಕರಾವಳಿಯ ಬಳಿಯ ನೈಋತ್ಯ

ಬಂಗಾಳಕೊಲ್ಲಿಯನ್ನು ತಲುಪುವ ಸಾಧ್ಯತೆ ಇದೆ. ಈ ನಡುವೆ, ದಿತ್ವಾ ಚಂಡಮಾರುತದಿಂದ ಹಾನಿಗೊಳಗಾಗಿರುವ ಶ್ರೀಲಂಕಾಗೆ ಭಾರತ, ಆಪರೇಷನ್ ಸಾಗರ್ ಬಂಧು ಅಡಿಯಲ್ಲಿ ತುರ್ತು ಸಹಾಯವನ್ನು ತ್ವರಿತವಾಗಿ ಒದಗಿಸಿದೆ. ಭಾರತೀಯ ವಾಯುಪಡೆಯ ವಿಮಾನ, ಆಹಾರ ಪದಾರ್ಥ, ಟಾರ್ಪೋಲಿನ್, ಕಂಬಳಿಗಳು, ನೈರ್ಮಲ್ಯ ಕಿಟ್‌ಗಳು ಸೇರಿದಂತೆ ೧೨ ಟನ್‌ಗಳಷ್ಟು  ಮಾನವೀಯ ನೆರವನ್ನು ಸಾಗಿಸುತ್ತಿದೆ. ನೌಕಾಪಡೆಯ ಹಡಗುಗಳು ಸಹ ಅಗತ್ಯ ಪರಿಹಾರ ಸಾಮಗ್ರಿಗಳನ್ನು ತಲುಪಿಸುತ್ತಿದೆ. ಈ ನಡುವೆ, ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ಪಡೆ ಎನ್‌ಡಿಆರ್‌ಎಫ್ ಎರಡು ವಿಶೇಷ ರಕ್ಷಣಾ ತಂಡಗಳನ್ನು ಆಪರೇಷನ್ ಸಾಗರ್ ಬಂಧು ಅಡಿ ಶ್ರೀಲಂಕಾದಲ್ಲಿ ಪರಿಹಾರ ಮತ್ತು ರಕ್ಷಣಾ ಕಾರ್ಯದಲ್ಲಿ ನೆರವಾಗಲು ನಿಯೋಜಿಸಿದೆ. ೮ನೇ ಬೆಟಾಲಿಯನ್‌ನ ಕಮಾಂಡಂಟ್ ಪಿ.ಕೆ. ತಿವಾರಿ ನೇತೃತ್ವದ  ಈ ತಂಡಗಳಲ್ಲಿ ೮೦ ತರಬೇತಿ ಪಡೆದ ರಕ್ಷಣಾ ಸಿಬ್ಬಂದಿ ಹಾಗೂ ನಾಲ್ಕು ಶ್ವಾನಗಳಿದ್ದು, ಇಂದು ಬೆಳಗ್ಗೆ ಶ್ರೀಲಂಕಾಗೆ ತೆರಳಿದೆ. ಬಂಗಾಳಕೊಲ್ಲಿಯಲ್ಲಿ ದಿತ್ವಾ ಚಂಡಮಾರುತ ತೀವ್ರಗೊಂಡು ತಮಿಳುನಾಡು ಕರಾವಳಿಯತ್ತ ಚಲಿಸುತ್ತಿರುವ ಹಿನ್ನೆಲೆ ಚೆನ್ನೈ ವಿಮಾನ ನಿಲ್ದಾಣದ ಅಧಿಕಾರಿಗಳು ೫೪ ನಿಗದಿತ ವಿಮಾನಗಳನ್ನು ರದ್ದುಗೊಳಿಸುವುದಾಗಿ ಘೋಷಿಸಿದ್ದಾರೆ. ಮುಂದಿನ ೪೮ ಗಂಟೆಗಳಲ್ಲಿ ಭಾರೀ ಮಳೆ ಹಾಗೂ ಬಲವಾದ ಗಾಳಿಯ ಮುನ್ಸೂಚನೆ ಬೆನ್ನಲ್ಲೇ ಪ್ರಯಾಣಿಕರ ಹಾಗೂ ವಿಮಾನಗಳ ಸುರಕ್ಷತೆ ಖಚಿತಪಡಿಸಲು ಈ ಕ್ರಮ ಕೈಗೊಳ್ಳಲಾಗಿದೆ.

<><><><>

ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯ ಡಿಜಿಸಿಎ, ಏರ್‌ಬಸ್ ಎ-೩೧೮, ಎ-೩೧೯, ಎ-೩೨೦ ಮತ್ತು ಎ-೩೨೧ ವಿಮಾನಗಳಿಗೆ ಕಡ್ಡಾಯ ಸುರಕ್ಷತಾ ಮಾರ್ಗಸೂಚಿಯನ್ನು ಬಿಡುಗಡೆ ಮಾಡಿದೆ, ಅಗತ್ಯವಿರುವ ಸುರಕ್ಷತಾ ಮಾನದಂಡಗಳನ್ನು ಪೂರೈಸದೆ ಯಾವುದೇ ವಿಮಾನವು ಸೇವೆಯಲ್ಲಿ ಮುಂದುವರಿಯುವುದಿಲ್ಲ ಎಂದು ಸ್ಪಷ್ಟಪಡಿಸಿದೆ. ಇದರ ಬೆನ್ನಲ್ಲೇ ಏರ್ ಬಸ್ ಸಂಸ್ಥೆ ತನ್ನ ಎ-೩೨೦ ಸರಣಿಯ ಸಾವಿರಾರು ವಿಮಾನಗಳಿಗೆ ಜಾಗತಿಕವಾಗಿ ತಕ್ಷಣದ ದುರಸ್ಥಿಗೆ ಆದೇಶಿಸಿದೆ. ಈ ಹಿನ್ನೆಲೆ ಭಾರತದಲ್ಲಿನ ಹಲವು ವಿಮಾನಯಾನ ಸಂಸ್ಥೆಗಳು ಹಾರಾಟದಲ್ಲಿ ಅಡಚಣೆಗಳನ್ನು ಎದುರಿಸುತ್ತಿವೆ. ವಿಶ್ವಾದ್ಯಂತದ ಸುಮಾರು ೬ ಸಾವಿರ ವಿಮಾನಗಳಿಗೆ ಇದರಿಂದ ಪರಿಣಾಮ ಬೀರಲಿದೆ ಎಂದು ಅಂದಾಜಿಸಲಾಗಿದೆ. ನಿರ್ಣಾಯಕ ಹಾರಾಟ ನಿಯಂತ್ರಣಗಳ ದತ್ತಾಂಶವನ್ನು ಹಾಳುಮಾಡಬಹುದಾದ ಎ-೩೨೦ ವಿಮಾನದಲ್ಲಿನ ಸೌರ ವಿಕಿರಣದ ಅಪಾಯವನ್ನು ಬಹಿರಂಗಪಡಿಸಿದ ಘಟನೆಯ ನಂತರ ದುರಸ್ತಿಯ ಆದೇಶ ಹೊರಡಿಸಲಾಗಿದೆ. ಏರ್ ಬಸ್ ಸಾಫ್ಟ್‌ವೇರ್ ನವೀಕರಣಕ್ಕೆ ಎರಡರಿಂದ ಮೂರು ದಿನಗಳು ಬೇಕಾಗುವ ಸಾಧ್ಯತೆ ಇದೆ.  ಆಸ್ಟ್ರೇಲಿಯಾದಲ್ಲಿ ವಿಮಾನ ವ್ಯತ್ಯಯದಿಂದಾಗಿ ಹಲವು ಪ್ರಯಾಣಿಕರಿಗೆ ತೊಂದರೆ ಉಂಟಾಗಿದೆ. ಆಸ್ಟ್ರೇಲಿಯಾದ ಜೆಟ್ ಸ್ಟಾರ್ ಏರ್‌ವೇಸ್ ಸುಮಾರು ೯೦ ವಿಮಾನಗಳನ್ನು ರದ್ದು ಅಥವಾ ವಿಳಂಬ ಮಾಡಲು ಘೋಷಿಸಿದೆ ಹಾಗೂ ಸುಮಾರು ೩೪ ವಿಮಾನಗಳಿಗೆ ಸಾಫ್ಟ್‌ವೇರ್ ನವೀಕರಣ ಮಾಡಲು ಸೂಚಿಸಿದೆ.

<><><><>

ಪಕ್ಷದ ಹೈಕಮಾಂಡ್ ಸೂಚನೆಯಂತೆ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ಜೊತೆ ಉಪಹಾರ ಸಭೆ ನಡೆಸಲಾಗಿದೆ ಎಂದು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ತಮ್ಮ ನಿವಾಸದಲ್ಲಿ ಉಪಹಾರ ಸಭೆಯ ಬಳಿಕ ಜಂಟಿ ಸುದ್ದಿಗೋಷ್ಠಿ ನಡೆಸಿ, ಮಾತನಾಡಿದ ಅವರು, ತಮ್ಮಿಬ್ಬರ ನಡುವೆ ಯಾವುದೇ ಗೊಂದಲಗಳಿಲ್ಲ ಎಂದು ಘೋಷಣೆ ಮಾಡಿದ್ದಾರೆ. ಇದೇ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪಕ್ಷದ ರಾಜ್ಯ ಘಟಕದಲ್ಲಿ ಯಾವುದೇ ಬಣಗಳಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ೨೦೨೮ರಲ್ಲಿ ಮತ್ತೆ ಪಕ್ಷವನ್ನು ಅಧಿಕಾರಕ್ಕೆ ತರುವುದೇ ಪಕ್ಷದ ಗುರಿ ಎಂದು ತಿಳಿಸಿದ್ದಾರೆ.

<><><><>

ದೇಶದ ಕಾರ್ಮಿಕ ವ್ಯವಸ್ಥೆಯನ್ನು ಸರಳೀಕರಿಸಿ, ಆಧುನಿಕ ಯುಗಕ್ಕೆ ಅನುಗುಣವಾಗಿ ಪರಿವರ್ತಿಸಲು ಕೇಂದ್ರ ಸರ್ಕಾರ ಈ ಹಿಂದಿನ ೨೯ ಕಾರ್ಮಿಕ ಕಾನೂನುಗಳನ್ನು ನಾಲ್ಕು ಸಮಗ್ರ ಕಾರ್ಮಿಕ ಸಂಹಿತೆಗಳನ್ನಾಗಿ ಪರಿವರ್ತಿಸಿದೆ.  ಇವು ಕಾರ್ಮಿಕರ ಹಿತದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದೆ. ಇಂದು ಮಧ್ಯಾಹ್ನ ೧.೩೦ರಿಂದ ೨ ಗಂಟೆಯವರೆಗೆ ಆಕಾಶವಾಣಿಯ ಮುಖ್ಯವಾಹಿನಿ ೬೧೨ ಕಿಲೋಹರ್ಟ್ಸ್ ಮತ್ತು ೧೦೧.೩ ಆಕಾಶವಾಣಿ ಎಫ್‌ಎಂನಲ್ಲಿ ನಾಲ್ಕು ಹೊಸ ಕಾರ್ಮಿಕ ಸಂಹಿತೆಗಳ ಮಹತ್ವ ಕುರಿತು ವಿಶೇಷ ಸಂವಾದ ಮೂಡಿಬರಲಿದೆ.

ಸಂವಾದದಲ್ಲಿ ವಿಧಿಪ್ರಜ್ಞಾ ಕರ್ನಾಟಕ ಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿ ಜಿ. ಪುರುಷೋತ್ತಮ್ ಪಾಲ್ಗೊಂಡು ನೂತನ ನಾಲ್ಕು ಸಂಹಿತೆಗಳ ಕುರಿತು ಮಾಹಿತಿ ಹಂಚಿಕೊಳ್ಳಲಿದ್ದಾರೆ.

<><><><>

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಿಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೨೮ ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮವು ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ವೆಬ್‌ಸೈಟ್ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಇದನ್ನು ಆಕಾಶವಾಣಿ ಜಾಲತಾಣ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

<><><><>

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ನಾಳೆ ಕುರುಕ್ಷೇತ್ರಕ್ಕೆ ಭೇಟಿ ನೀಡಲಿದ್ದು, ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆಯ ೨೦ನೇ ಘಟಿಕೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಅಂತಾರಾಷ್ಟ್ರೀಯ ಗೀತಾ ಮಹೋತ್ಸವದ ನೇಪಥ್ಯದಲ್ಲಿ ನಡೆಯುತ್ತಿರುವ ಅಖಿಲ ಭಾರತೀಯ ದೇವಸ್ಥಾನಂ ಸಮ್ಮೇಳನದಲ್ಲಿಯೂ ಅವರು ಭಾಗವಹಿಸಲಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>